ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 296

ಸದಸ್ಯರ ಹೆಸರು : ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 16/07/2019.

ಉತ್ತರಿಸಬೇಕಾದ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿನ ಪ್ರೌಢ ಶಿಕ್ಷಣ ವಿಭಾಗದಲ್ಲಿ ಹೆಚ್ಚುವರಿ ಶಿಕ್ಷಕರನ್ನು ಗುರುತಿಸುವುದರಲ್ಲಿ ಲೋಪವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಬಂದಿದಲ್ಲಿ, ಪ್ರೌಢಶಿಕ್ಷಕರಿಗೆ ಇದರಿಂದಾಗುವ ಬಾಧಕಗಳನ್ನು ಸರ್ಕಾರವು ಅರಿತಿದೆಯೇ;	ಈ ಬಗ್ಗೆ ಪರಿಶೀಲಿಸಿ ನ್ಯೂನ್ಯತೆಗಳನ್ನು ಇತ್ಯರ್ಥಪಡಿಸಲಾಗಿದೆ. ಶಾಲೆಗಳಲ್ಲಿ ಸಿಬ್ಬಂದಿ ಸ್ಥರವಿನ್ಯಾಸಕ್ಕಿಂತ ಹೆಚ್ಚಾಗಿರುವ ಶಿಕ್ಷಕರ ಹುದ್ದೆಗಳನ್ನು ಹೆಚ್ಚುವರಿ ಎಂದು ಗುರುತಿಸಿ, ಹೆಚ್ಚುವರಿ ಪ್ರಕ್ರಿಯೆ ನಡೆಸಲಾಗುತ್ತದೆ.
ಇ)	ಹೆಚ್ಚುವರಿ ಶಿಕ್ಷಕರ ಪ್ರಕ್ರಿಯೆಯಲ್ಲಿರುವ ಗೊಂದಲಗಳನ್ನು ನಿವಾರಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು).	ಶಿಕ್ಷಕರು ಟಿ.ಡಿ.ಎಸ್. ತಂತ್ರಾಂಶದಲ್ಲಿ ಸ್ವತಃ ದಾಖಲಿಸಿದ ಮಾಹಿತಿಯನ್ನು ಆಧರಿಸಿ ಹೆಚ್ಚುವರಿ ಪ್ರಕ್ರಿಯೆಗಳನ್ನು ನಡೆಸಲಾಗುತ್ತಿದ್ದು, ಶಿಕ್ಷಕರಿಗೆ ತಮ್ಮ ಸೇವಾ ವಿವರಗಳನ್ನು . ಟಿ.ಡಿ.ಎಸ್ ತಂತ್ರಾಂಶದಲ್ಲಿ ಪರಿಶೀಲಿಸಿಕೊಂಡು ಅಪ್ಡೇಟ್ ಮಾಡಲು ಅವಕಾಶ ಕಲ್ಪಿಸಲಾಗಿದೆ. ಹೆಚ್ಚುವರಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಶಿಕ್ಷಕರಿಂದ ಸ್ವೀಕರಿಸಿದ ಮನವಿ ಪತ್ರಗಳನ್ನು ಪರಿಶೀಲಿಸಿ, ಕಾಲಕಾಲಕ್ಕೆ ತಿದ್ದುಪಡಿ ಹೊರಡಿಸಿ ಸರಿಪಡಿಸಲಾಗುತ್ತಿದೆ. ಇದಕ್ಕೆ ಸಾಕಷ್ಟು ಕಾಲಾವಕಾಶ ನೀಡಲಾಗಿದೆ.

ಸಂಖ್ಯೆ: ಇಪಿ 12 ಎಲ್.ಬಿ.ಪಿ 2019

(ಎಸ್.ಆರ್. ಶ್ರೀನಿವಾಸ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು